ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

ಭಾಗ – ೫ Part – V	ಬೆಂಗಳೂರು, ಗುರುವಾರ, ೦೩, ಸೆಪ್ಟೆಂಬರ್, ೨೦೨೬ (ಭಾದ್ರಪದ ೧೨, ಶಕವರ್ಷ, ೧೯೪೮) BENGALURU, THURSDAY, 03 SEPTEMBER, 2026 (BHADRAPADA 12, SHAKAVARSHA, 1948)	ನಂ. ೮೧೫ No. 815

ಕರ್ನಾಟಕ ಸರ್ಕಾರ
ಶಾಲಾ ಶಿಕ್ಷಣ ಇಲಾಖೆ
ಆಯ್ಕೆ ಮತ್ತು ನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾ ಉಪನಿರ್ದೇಶಕರು [ಆಡಳಿತ], ವಿಜಯನಗರ ಜಿಲ್ಲೆ

ಸಂಖ್ಯೆ: ಇ2/ಆಡಳಿತ/ಪ್ರಾ.ಶಾ.ಶಿ/ನೇಮಕಾತಿ/66/2026-27 **ದಿನಾಂಕ : 03/09/2026**

ಸೇರ್ಪಡೆ ಅಧಿಸೂಚನೆ

ಶಾಲಾ ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಲ್ಯಾಣ ಕರ್ನಾಟಕ ಉಳಿದ ಮೂಲ ವೃಂದದ (RPC) ಶೇ 20% ಹುದ್ದೆಗಳಿಗೆ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕ (1 ರಿಂದ 5 ನೇ ತರಗತಿ) ವೃಂದದ ಹುದ್ದೆಗಳಿಗೆ ಹಾಗೂ ದೈಹಿಕ ಶಿಕ್ಷಣ ಶಿಕ್ಷಕ ಗ್ರೇಡ್-II (1 ರಿಂದ 8ನೇ ತರಗತಿ) ಹುದ್ದೆಗಳ ನೇಮಕಾತಿಯ ಸಂಬಂಧ ದಿನಾಂಕ:12.08.2026 ರಂದು ನೇಮಕಾತಿ ಅಧಿಸೂಚನೆ ಹೊರಡಿಸಲಾಗಿತ್ತು. ಸದರಿ ಅಧಿಸೂಚನೆಗೆ ಈ ಕೆಳಕಂಡ ಅಂಶಗಳನ್ನು ಸೇರ್ಪಡೆಗೊಳಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.

ಅಧಿಸೂಚನೆಯಲ್ಲಿರುವುದು	ಸೇರ್ಪಡೆಯಂತೆ ಓದಿಕೊಳ್ಳತಕ್ಕದ್ದು
ಅಧಿಸೂಚನೆ ಪುಟ ಸಂಖ್ಯೆ:07ರಲ್ಲಿನ ಕಂಡಿಕೆ:12 ರ **ಮೀಸಲಾತಿ: ಉಪಕಂಡಿಕೆ (A)ರಲ್ಲಿ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ಸಲ್ಲಿಸುವ ಸಂಬಂಧ** ಮಾಹಿತಿ ನೀಡಿರುವ ಕೋಷ್ಟಕದ **ಕ್ರ.ಸಂ.03 ರಲ್ಲಿ " ಪ್ರವರ್ಗ –II(a), II(b), III(a), ಮತ್ತು III(b), ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ರಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಲ್ಲಿಸಲು ತಿಳಿಸಲಾಗಿದೆ".**	ಸರ್ಕಾರದ ಆದೇಶ ಸಂಖ್ಯೆ: ಹಿಂವಕ 232 ಬಿಸಿಎ 2026 ಬೆಂಗಳೂರು ದಿ:01/09/2026 ರಲ್ಲಿ ರಾಜ್ಯ ಸರ್ಕಾರದ ವ್ಯಾಪ್ತಿಗೆ ಬರುವ ಉದ್ಯೋಗದ ಮೀಸಲಾತಿಗಾಗಿ ನೇರ ನೇಮಕಾತಿ ಸಂದರ್ಭದಲ್ಲಿ ವಿವಾಹಿತ ಮಹಿಳೆ /ಪುರುಷ ಅಭ್ಯರ್ಥಿಗಳ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನೀಡುವ ಸಂದರ್ಭದಲ್ಲಿ ಈ ಕೆಳಕಂಡ ಅಂಶಗಳನ್ನು ಪರಿಗಣಿಸಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ವಿತರಿಸಲು ಆದೇಶಿಸಲಾಗಿರುತ್ತದೆ. ಸದರಿ ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಓದಿಕೊಳ್ಳತಕ್ಕದ್ದು. **"ವಿವಾಹಿತ ಮಹಿಳಾ/ಪುರುಷ ಅರ್ಜಿದಾರಳ/ನ ಉತ್ಪನ್ನಕ್ಕೆ ಅವಳ/ಅವನ ತಂದೆ ತಾಯಿಗಳ ಉತ್ಪನ್ನ ಸೇರಿಸಬಾರದು. ಅಂಥ ಪ್ರಕರಣಗಳಲ್ಲಿ ಪತಿ ಪತ್ನಿಯರು ಒಂದು ಸ್ವಾಯತ್ತ ಕುಟುಂಬದಂತೆ ಪ್ರತ್ಯೇಕವಾಗಿ ವಾಸಿಸುತ್ತಿದ್ದಲ್ಲಿ ಅರ್ಜಿದಾರಳ/ನ ಉತ್ಪನ್ನಕ್ಕೆ ಅವಳ/ಅವನ ಪತಿ/ಪತ್ನಿಯ ಉತ್ಪನ್ನವನ್ನು ಸೇರಿಸಬೇಕು. ಅವರು ಅವಿಭಕ್ತ ಕುಟುಂಬದ ಅಂಗವಾಗಿ ವಾಸಿಸುತ್ತಿದ್ದರೆ, ಅರ್ಜಿದಾರಳ /ನ ಉತ್ಪನ್ನ ಮತ್ತು ಅವಿಭಕ್ತ ಕುಟುಂಬದ ಉತ್ಪನ್ನವನ್ನು ಒಟ್ಟಿಗೆ ಸೇರಿಸಿ ಕುಟುಂಬದ ಉತ್ಪನ್ನವನ್ನು ಕಂಡುಹಿಡಿಯಬೇಕು."** **ಅದರಂತೆ,** ಇತರೆ ಹಿಂದುಳಿದ ವರ್ಗಗಳಾದ, ಪ್ರವರ್ಗ –II(a), II(b), III(a), ಮತ್ತು III(b), ವರ್ಗಗಳಿಗೆ ಸೇರಿದ ವಿವಾಹಿತ ಮಹಿಳಾ/ಪುರುಷ ಅಭ್ಯರ್ಥಿಗಳು ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು **ನಮೂನೆ-**

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297

	ಎಫ್ ರಲ್ಲಿ ಪಡೆದು ಸದರಿ ನೇಮಕಾತಿಯ ಅರ್ಜಿಯೊಂದಿಗೆ ಲಗತ್ತಿಸಿ, ಸಲ್ಲಿಸುವುದು. ಅದರಂತೆ ಓದಿಕೊಳ್ಳತಕ್ಕದ್ದು. ಇತರೆ ಹಿಂದುಳಿದ ವರ್ಗಗಳಾದ, ಪ್ರವರ್ಗ –II(a), II(b), III(a), ಮತ್ತು III(b), ವರ್ಗಗಳಿಗೆ ಸೇರಿದ ವಿವಾಹಿತ ಮಹಿಳಾ/ಪುರುಷ ಅಭ್ಯರ್ಥಿಗಳು ಈ ಮೇಲಿನ ಸರ್ಕಾರಿ ಆದೇಶದಂತೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಲಗತ್ತಿಸದೇ ಆನ್‌ಲೈನ್ ಅರ್ಜಿಯನ್ನು, Submit ಮಾಡಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನಿಯಮದಂತೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಹೊಸದಾಗಿ Upload ಮಾಡಲು Online ಅರ್ಜಿಯಲ್ಲಿ **Edit ಗೆ ಅವಕಾಶ ನೀಡಿದೆ.** ಹಾಗೂ ಅರ್ಜಿ ಸಲ್ಲಿಸುವ **ಕೊನೆಯ ದಿನಾಂಕವನ್ನು ಸಹ ದಿನಾಂಕ:25/09/2026 ಹಾಗೂ ಪಾವತಿಸಿದ ಶುಲ್ಕ ಇತ್ಯರ್ಥಪಡಿಸಿಕೊಳ್ಳಲು ಕೊನೆಯ ದಿನಾಂಕ:28/09/2026 ರವರೆಗೆ ವಿಸ್ತರಿಸಿದೆ.** ಅಭ್ಯರ್ಥಿಗಳು **Edit option** ಅನ್ನು ಬಳಸಿಕೊಂಡು ನಿಯಮದಂತೆ ತಮ್ಮ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ವನ್ನು ಲಗತ್ತಿಸಿ, ಅರ್ಜಿ ಸಲ್ಲಿಸುವುದು.
ಅಧಿಸೂಚನೆಯ ಪುಟಸಂಖ್ಯೆ: 17ರಲ್ಲಿನ ಕಂಡಿಕೆ-24ರ ಉಪಕಂಡಿಕೆ-Vರಲ್ಲಿ ಅರ್ಜಿಗಳನ್ನು ದಿನಾಂಕ:18/08/2026 ರಿಂದ ದಿನಾಂಕ:07/09/2026 ರೊಳಗೆ ಆನ್‌ಲೈನ್ ಮೂಲಕ ಸಲ್ಲಿಸಬೇಕು.	ಅಭ್ಯರ್ಥಿಗಳು ಶುಲ್ಕ ಪಾವತಿಯೊಂದಿಗೆ **ಆನ್‌ಲೈನ್ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ:25/09/2026 ಹಾಗೂ ಪಾವತಿಸಿರುವ ಶುಲ್ಕವನ್ನು ಇತ್ಯರ್ಥ ಪಡಿಸಿಕೊಳ್ಳಲು ನಿಗದಿಪಡಿಸಿದ ಕೊನೆಯ ದಿ:28/09/2026** ಎಂದು ಓದಿಕೊಳ್ಳತಕ್ಕದ್ದು. ಅಧಿಸೂಚನೆಯಲ್ಲಿ ಸ್ಪಷ್ಟಪಡಿಸಿದಂತೆ ಅಭ್ಯರ್ಥಿಗಳು ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು ಹಾಗೂ ಅರ್ಜಿಯೊಂದಿಗೆ Upload ಮಾಡಿರಬೇಕು.
ನೇಮಕಾತಿ ಅಧಿಸೂಚನೆ ಪುಟ ಸಂಖ್ಯೆ:16ರಲ್ಲಿನ ಕಂಡಿಕೆ-19ರ ಉಪಕಂಡಿಕೆ-iii ಮತ್ತು 19ರಲ್ಲಿ ಇಲಾಖಾ ವೆಬ್‌ಸೈಟ್ ವಿಳಾಸ :**https://schooleducation.kar.nic.in** ಎಂದು ಮುದ್ರಿತವಾಗಿರುತ್ತದೆ.	ಶಾಲಾ ಶಿಕ್ಷಣ ಇಲಾಖೆಯ ವೆಬ್‌ಸೈಟ್ ವಿಳಾಸ **https://schooleducation.karnataka.gov.in** ಎಂದು ಓದಿಕೊಳ್ಳತಕ್ಕದ್ದು.

ಸಹಿ/-
ನೇಮಕಾತಿ ಪ್ರಾಧಿಕಾರ ಹಾಗೂ ಉಪನಿರ್ದೇಶಕರು (ಆಡಳಿತ),
ಶಾಲಾ ಶಿಕ್ಷಣ ಇಲಾಖೆ, ವಿಜಯನಗರ ಜಿಲ್ಲೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

P S BASAVARAJU Digitally signed by P S BASAVARAJU Date: 2026.09.03 23:48:32 +05'30'